**All India Radio: Bangalore**
**National Bulletin In Kannada**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**09.09.2026 19.35 hrs**

---

ಮುಖ್ಯಾಂಶಗಳು

೧. ಹತ್ತು ಸಾವಿರದ ೭೦೦ ಕೋಟಿ ರೂಪಾಯಿ ಮೊತ್ತದ ರೈಲ್ವೆ ಯೋಜನೆಗಳಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ

೨. ಮುಂಬೈನಲ್ಲಿ ಬ್ರಿಕ್ಸ್ ಹಣಕಾಸು ಸಚಿವರು, ಕೇಂದ್ರ ಬ್ಯಾಂಕ್ ಗವರ್ನರ್‌ಗಳ ಸಭೆ ಪ್ರಗತಿಯಲ್ಲಿ

೩. ನೇಪಾಳ ಪ್ರವಾಹ: ಇನ್ನೂ ಪತ್ತೆಯಾಗದ ಐದು ಸಾವಿರದ ೩೨೮ ಜನರು

೪. ಯುಎಸ್ ಓಪನ್ ಟೆನಿಸ್: ಪುರುಷರ ಸಿಂಗಲ್ಸ್ ಸೆಮಿಫೈನಲ್‌ಗೆ ಬೆನ್ ಶೆಲ್ಟನ್ ಲಗ್ಗೆ

---

ಕೇಂದ್ರ ಸಚಿವ ಸಂಪುಟ ಒಟ್ಟು ಹತ್ತು ಸಾವಿರದ ೭೦೦ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಮೊತ್ತದ ಮೂರು ಮಲ್ಟಿಟ್ರ್ಯಾಕಿಂಗ್ ರೈಲ್ವೆ ಯೋಜನೆಗಳಿಗೆ ಅನುಮೋದನೆ ನೀಡಿದೆ.

ನವದೆಹಲಿಯಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ ಈ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಈ ಯೋಜನೆಗಳು ಪಶ್ಚಿಮ ಬಂಗಾಳ, ಜಾರ್ಖಂಡ್, ಒಡಿಶಾ, ಮಧ್ಯಪ್ರದೇಶ ಮತ್ತು ಛತ್ತೀಸ್‌ಗಢದಾದ್ಯಂತ ೧೪ ಜಿಲ್ಲೆಗಳನ್ನು ಒಳಗೊಂಡಿದ್ದು, ಭಾರತೀಯ ರೈಲ್ವೆಯ ಅಸ್ತಿತ್ವದಲ್ಲಿರುವ ಜಾಲವನ್ನು ಸುಮಾರು ೭೫೮ ಕಿಲೋಮೀಟರ್‌ಗಳಷ್ಟು ಹೆಚ್ಚಿಸಲಿದೆ ಎಂದು ತಿಳಿಸಿದರು.

ಈ ಯೋಜನೆಗಳಲ್ಲಿ ಖರಗ್‌ಪುರದಿಂದ ಜಾರ್ಸುಗುಡಾ ನಾಲ್ಕನೇ ಮಾರ್ಗ, ಕಟ್ನಿಯಿಂದ ಪೆಂಡ್ರಾ ರಸ್ತೆಯ ನಾಲ್ಕನೇ ಮಾರ್ಗ ಮತ್ತು ಬಿಲಾಸ್‌ಪುರದಿಂದ ಪೆಂಡ್ರಾ ರಸ್ತೆಯ ಮೂರನೇ ಮಾರ್ಗ ಸೇರಿವೆ ಎಂದು ಹೇಳಿದರು.

ಕರ್ನಾಟಕ, ತಮಿಳುನಾಡು, ಆಂಧ್ರಪ್ರದೇಶ, ಮತ್ತು ತೆಲಂಗಾಣ ರಾಜ್ಯಗಳಾದ್ಯಂತ ೧೭ ಜಿಲ್ಲೆಗಳನ್ನು ಒಳಗೊಂಡ ಐದು ಮಲ್ಟಿಟ್ರ್ಯಾಕಿಂಗ್ ಯೋಜನೆಗಳನ್ನು ಕೇಂದ್ರ ಸಚಿವ ಸಂಪುಟ

ಅನುಮೋದಿಸಿದೆ. ಇದು ಭಾರತೀಯ ರೈಲ್ವೆಯ ಅಸ್ತಿತ್ವದಲ್ಲಿರುವ ಜಾಲವನ್ನು ಸುಮಾರು ೫೪೦ ಕಿಲೋಮೀಟರ್‌ಗಳಷ್ಟು ಹೆಚ್ಚಿಸುತ್ತದೆ ಎಂದು ಅವರು ಮಾಹಿತಿ ನೀಡಿದರು.

ಯೋಜನೆಗಳ ಒಟ್ಟು ಅಂದಾಜು ವೆಚ್ಚ ೧೦ ಸಾವಿರ ೨೧ ಕೋಟಿಗಿಂತ ಹೆಚ್ಚಿದ್ದು, ಅವುಗಳನ್ನು ೨೦೨೯-೩೦ ರವರೆಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ. ಈ ಮಾರ್ಗಗಳಲ್ಲಿ ವೈಟ್‌ಫೀಲ್ಡ್ ನಿಂದ ಬಂಗಾರಪೇಟೆ ಮೂರನೇ ಮಾರ್ಗ, ಅರಕ್ಕೋಣಂ ನಿಂದ ರೇಣಿಗುಂಟ ಮೂರನೇ ಮತ್ತು ನಾಲ್ಕನೇ ಮಾರ್ಗ, ಮತ್ತು ನಾಲ್ಕನೇ ಮಾರ್ಗ ಮತ್ತು ಹೊಸೂರು ನಿಂದ ಓಮಲೂರು ಮಾರ್ಗದ ದ್ವಿಗುಣಗೊಳಿಸುವಿಕೆ ಸೇರಿವೆ.

ಅನುಮೋದಿತ ಮಲ್ಟಿ-ಟ್ರ್ಯಾಕಿಂಗ್ ಯೋಜನೆಗಳು ಸುಮಾರು ೫೨ ಲಕ್ಷ ಜನಸಂಖ್ಯೆಯನ್ನು ಹೊಂದಿರುವ ಸುಮಾರು ಎರಡು ಸಾವಿರದ ನೂರು ಹಳ್ಳಿಗಳಿಗೆ ಸಂಪರ್ಕ ಹೆಚ್ಚಿಸುತ್ತವೆ ಎಂದು ಸಚಿವ ಅಶ್ವಿನಿ ವೈಷ್ಣವ್ ವಿವರಿಸಿದರು.

ಕೇಂದ್ರ ಸಚಿವ ಸಂಪುಟ ಇಂದು ನಾಲ್ಕು ಪಥಗಳ ರೈಲು ಮಾರ್ಗಗಳಿಗೆ ಅನುಮೋದನೆ ನೀಡಿದೆ. ಇವುಗಳಲ್ಲಿ ದೆಹಲಿಯಿಂದ ಮುಂಬೈ, ಮುಂಬೈನಿಂದ ಚೆನ್ನೈ, ಚೆನ್ನೈನಿಂದ ಕೋಲ್ಕತ್ತಾ ಮತ್ತು ಕೋಲ್ಕತ್ತಾದಿಂದ ದೆಹಲಿವರೆಗಿನ ಯೋಜನೆಗಳು ಸೇರಿವೆ. ಈ ಮಾರ್ಗಗಳು ೧೧ ಸಾವಿರ ಕಿಲೋಮೀಟರ್ ರೈಲ್ವೆ ಜಾಲಗಳನ್ನು ಒಳಗೊಂಡಿವೆ ಮತ್ತು ಎರಡು ಸಾವಿರ ಕಿಲೋಮೀಟರ್‌ಗಳ ನಾಲ್ಕು ಲೈನಿಂಗ್ ಪೂರ್ಣಗೊಂಡಿದೆ. ನಾಲ್ಕು ಲೈನಿಂಗ್‌ಗಾಗಿ ಈ ಅನುಮೋದಿತ ಯೋಜನೆಗಳು ಹೆಚ್ಚಿನ ಸಾಂದ್ರತೆಯ ರೈಲ್ವೆ ಜಾಲಗಳಿಗೆ ಸಂಬಂಧಿಸಿವೆ ಎಂದು ಅವರು ತಿಳಿಸಿದರು.

ಹೆಚ್ಚಿದ ಮಾರ್ಗ ಸಾಮರ್ಥ್ಯವು ಚಲನಶೀಲತೆಯನ್ನು ಗಮನಾರ್ಹವಾಗಿ ಹೆಚ್ಚಿಸುತ್ತದೆ. ಇದರ ಪರಿಣಾಮವಾಗಿ ಭಾರತೀಯ ರೈಲ್ವೆಯ ಸುಧಾರಿತ ಕಾರ್ಯಾಚರಣೆಯ ದಕ್ಷತೆ ಮತ್ತು ಸೇವಾ ವಿಶ್ವಾಸಾರ್ಹತೆ ಹೆಚ್ಚುತ್ತದೆ. ಇದರಿಂದ ರೈಲ್ವೆ ಕಾರ್ಯಾಚರಣೆಗಳನ್ನು ಸುಗಮಗೊಳಿಸಲು ಮತ್ತು ದಟ್ಟಣೆಯನ್ನು ನಿವಾರಿಸಲು ಸಾಧ್ಯವಾಗಲಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

---

ಮುಂದಿನ ವರ್ಷ ಮುಂಬೈ-ಅಹಮದಾಬಾದ್ ಬುಲೆಟ್ ರೈಲು ಸೇವೆ ಪ್ರಾರಂಭವಾಗಲಿದೆ. ಈ ಕಾರಿಡಾರ್ ನಿರ್ಮಾಣ ಕಾರ್ಯ ವೇಗವಾಗಿ ಪ್ರಗತಿಯಲ್ಲಿದ್ದು, ಆರಂಭದಲ್ಲಿ ಸೂರತ್‌ನಿಂದ ವಾಪಿವರೆಗಿನ ೧೦೦ ಕಿಲೋಮೀಟರ್ ವಿಭಾಗವು ಮುಕ್ತವಾಗಲಿದೆ ಎಂದು ಕೇಂದ್ರ ವಾರ್ತೆ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

---

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ಶ್ರೀಲಂಕಾದ ಕೊಲಂಬೊದಲ್ಲಿ ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ ದಿಸ್ಸನಾಯಕ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ಸಭೆಯಲ್ಲಿ, ಭಾರತ ಮತ್ತು ಶ್ರೀಲಂಕಾದ ಸುರಕ್ಷತೆ, ಭದ್ರತೆ, ಶಾಂತಿ ಮತ್ತು ಸಮೃದ್ಧಿಯನ್ನು ಖಚಿತಪಡಿಸಿಕೊಳ್ಳಲು ಜಂಟಿಯಾಗಿ ಕೆಲಸ ಮಾಡುವುದನ್ನು ಎರಡೂ ಕಡೆಯವರು ಪುನರುಚ್ಚರಿಸಿದರು.

ಶ್ರೀಲಂಕಾ ವಾಯುಪಡೆಗೆ ೩೭೦ ಬಂದೂಕುಗಳ ರಫ್ತು ಹಾಗೂ ಎರಡೂ ದೇಶಗಳ ರಾಷ್ಟ್ರೀಯ ಕೆಡೆಟ್ ಕಾರ್ಪ್ಸ್ ಮತ್ತು ರಾಷ್ಟ್ರೀಯ ರಕ್ಷಣಾ ಕಾಲೇಜುಗಳ ನಡುವಿನ ಸಹಕಾರದ ಕುರಿತು ಎರಡೂ ಕಡೆಯವರು ತಿಳುವಳಿಕೆ ಪತ್ರಗಳನ್ನು ವಿನಿಮಯ ಮಾಡಿಕೊಂಡರು.

ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ ದಿಸ್ಸನಾಯಕ ಮಾತನಾಡಿ, ಭಾರತದ ಭದ್ರತಾ ಹಿತಾಸಕ್ತಿಗಳಿಗೆ ವಿರುದ್ಧವಾದ ಯಾವುದೇ ಚಟುವಟಿಕೆಗಳಿಗೆ ತನ್ನ ಪ್ರದೇಶವನ್ನು ಬಳಸಲು ಎಂದಿಗೂ ಅನುಮತಿಸುವುದಿಲ್ಲ ಎಂದು ಪುನರುಚ್ಚರಿಸಿದರು.

ದಿತ್ವಾ ಚಂಡಮಾರುತದ ಸಮಯದಲ್ಲಿ 'ಆಪರೇಷನ್ ಸಾಗರ್ ಬಂಧು' ಭಾಗವಾಗಿ ಭಾರತ ಒದಗಿಸಿದ ನೆರವು ಮತ್ತು ದ್ವೀಪದ ವಿವಿಧ ಭಾಗಗಳಲ್ಲಿ ಪುನರ್‌ನಿರ್ಮಾಣ ಮತ್ತು ಪುನರ್‌ವಸತಿ ಕಾರ್ಯಗಳನ್ನು ಸುಗಮಗೊಳಿಸಲು ಭಾರತದ ವಿಸ್ತರಿಸಿದ ಸಮಗ್ರ ಪುನರ್‌ವಸತಿ ಪ್ಯಾಕೇಜ್‌ಗೆ ಅವರು ಕೃತಜ್ಞತೆಗಳನ್ನು ಸಲ್ಲಿಸಿದರು.

---

ಬ್ರಿಕ್ಸ್ ನಾಯಕರ ಶೃಂಗಸಭೆಗೆ ಮುನ್ನ, ಅಂತಿಮ ಬ್ರಿಕ್ಸ್ ಹಣಕಾಸು ಸಚಿವರು ಮತ್ತು ಕೇಂದ್ರ ಬ್ಯಾಂಕ್ ಗವರ್ನರ್‌ಗಳ ಸಭೆ ಮುಂಬೈನಲ್ಲಿ ಪ್ರಗತಿಯಲ್ಲಿದೆ.

"ಸ್ಥಿತಿಸ್ಥಾಪಕತೆ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆಗಾಗಿ ನಿರ್ಮಾಣ" ಎಂಬದು ಈ ವರ್ಷದ ಬ್ರಿಕ್ಸ್ ಹಣಕಾಸು ಸಚಿವರು ಮತ್ತು ಕೇಂದ್ರ ಬ್ಯಾಂಕ್ ಗವರ್ನರ್‌ಗಳ ಸಭೆಯ ಧ್ಯೇಯವಾಕ್ಯವಾಗಿದೆ. ಇಂದು ಮತ್ತು ನಾಳೆ ಸಭೆ ನಡೆಯಲಿದೆ.

ಬ್ರಿಕ್ಸ್ ಹಣಕಾಸು ಸಚಿವರು ಮತ್ತು ಕೇಂದ್ರ ಬ್ಯಾಂಕ್ ಗವರ್ನರ್‌ಗಳು ಕಳೆದ ತಿಂಗಳು ಜೈಪುರದಲ್ಲಿ ಸಭೆ ನಡೆಸಿದ್ದರು.

---

ಬಿಹಾರದಲ್ಲಿ ಪ್ರವಾಹ ಪರಿಸ್ಥಿತಿ ಸ್ವಲ್ಪ ಸುಧಾರಿಸಿದ್ದು, ಗಂಗಾ, ಗಂಡಕ್, ಕೋಸಿ, ಸೋನ್, ಪುನ್ಪುನ್ ಮತ್ತು ಇತರ ನದಿಗಳಲ್ಲಿ ನೀರಿನ ಮಟ್ಟ ಕಡಿಮೆಯಾಗುತ್ತಿದೆ. ಆದರೂ, ಇನ್ನೂ ಹಲವಾರು ನದಿಗಳು ಹೆಚ್ಚಿನ ಮಟ್ಟದಲ್ಲಿ ಹರಿಯುತ್ತಿದ್ದು, ಪೀಡಿತ ಪ್ರದೇಶಗಳಲ್ಲಿ ಪರಿಹಾರ ಕಾರ್ಯಾಚರಣೆ ಮುಂದುವರೆದಿದೆ.

ಮುಂಗೇರ್, ಭಾಗಲ್ಪುರ್ ಮತ್ತು ಕಹಲ್ಗಾಂವ್‌ನಲ್ಲಿ ನದಿ ನೀರಿನ ಮಟ್ಟ ಏರುವ ಸಾಧ್ಯತೆ ಇದ್ದು, ತಗ್ಗು ಪ್ರದೇಶಗಳಲ್ಲಿ ನೀರಿನ ಒತ್ತಡ ಹೆಚ್ಚುತ್ತಿದೆ. ಜಲಸಂಪನ್ಮೂಲ ಇಲಾಖೆ ಮತ್ತು ಜಿಲ್ಲಾಡಳಿತ ತಂಡಗಳು ಒಡ್ಡುಗಳ ಮೇಲೆ ನಿಗಾ ಇಡುತ್ತಿವೆ.

ಪಾಟ್ನಾ, ಸರನ್, ವೈಶಾಲಿ, ಬೇಗುಸರಾಯ್, ಖಗಾರಿಯಾ, ಸಮಸ್ತಿಪುರ, ಜೆಹಾನಾಬಾದ್ ಮತ್ತು ಅರ್ವಾಲ್ ಜಿಲ್ಲೆಗಳ ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಪರಿಹಾರ ಕಾರ್ಯಾಚರಣೆಗಳು ಮುಂದುವರಿದಿವೆ. ೪೫೬ ಸಮುದಾಯ ಅಡುಗೆ ಮನೆಗಳನ್ನು ನಡೆಸಲಾಗುತ್ತಿದೆ.

ಪರಿಹಾರ ಶಿಬಿರಗಳಲ್ಲಿ ಮಕ್ಕಳಿಗೆ ಹಾಲು, ಮಹಿಳೆಯರಿಗೆ ನೈರ್ಮಲ್ಯ ಕಿಟ್‌ಗಳು ಮತ್ತು ವೈದ್ಯಕೀಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

---

ನೇಪಾಳದಲ್ಲಿ ಸಂಭವಿಸಿದ ಭೀಕರ ಪ್ರವಾಹದಲ್ಲಿ ಮೃತಪಟ್ಟವರ ಸಂಖ್ಯೆ ಒಂದು ಸಾವಿರದ ೩೬೫ ಕ್ಕೆ ಏರಿಕೆಯಾಗಿದ್ದು, ಪೀಡಿತ ಪ್ರದೇಶಗಳಿಂದ ಹೆಚ್ಚಿನ ಮೃತದೇಹಗಳನ್ನು ಹೊರತೆಗೆಯಲಾಗಿದೆ.

ಒಟ್ಟು ಐದು ಸಾವಿರದ ೩೨೬ ಜನರು ಕಾಣೆಯಾಗಿದ್ದು, ಈ ಪೈಕಿ ಕನಿಷ್ಠ ೫೮೯ ವಿದೇಶಿ ಪ್ರಜೆಗಳಾಗಿದ್ದಾರೆ. ರಕ್ಷಣಾ ತಂಡಗಳು ಶೋಧ ಕಾರ್ಯ ಮುಂದುವರಿಸಿವೆ.

ನೇಪಾಳ ಸರ್ಕಾರದ ಪ್ರಕಾರ, ರಕ್ಷಣಾ ತಂಡಗಳು ಚಿತ್ವಾನ್ ಜಿಲ್ಲೆಯಿಂದ ೩೬೩, ನವಲ್ಪರಾಸಿ ಪೂರ್ವದಿಂದ ೨೨೬, ನವಲ್ಪರಾಸಿ ಪಶ್ಚಿಮದಿಂದ ೨೨೨ ಮತ್ತು ನುವಕೋಟ್‌ನಿಂದ ೧೯೭ ಮೃತದೇಹಗಳನ್ನು ವಶಪಡಿಸಿಕೊಂಡಿವೆ. ಅದೇ ರೀತಿ, ರಸುವಾ ಜಿಲ್ಲೆಯಿಂದ ೧೭೪, ಗೂರ್ಖಾದಿಂದ ೭೫, ಧಡಿಂಗ್‌ನಿಂದ ೭೦ ಮತ್ತು ತನಾಹುದಿಂದ ೩೮ ಮೃತದೇಹಗಳನ್ನು ಹೊರತೆಗೆಯಲಾಗಿದೆ. ಇಲ್ಲಿಯವರೆಗೆ, ಗುರುತಿನ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದ ನಂತರ ೧೦೨ ಮೃತದೇಹಗಳನ್ನು ಕುಟುಂಬ ಸದಸ್ಯರಿಗೆ ಹಸ್ತಾಂತರಿಸಲಾಗಿದೆ.

ಗುರುತಿಸಲು ಅನುಕೂಲವಾಗುವಂತೆ ಡಿಎನ್‌ಎ ಮಾದರಿಗಳ ಸಂಗ್ರಹ ಸೇರಿದಂತೆ ಎಲ್ಲಾ ನಿಗದಿತ ಶಿಷ್ಟಾಚಾರಗಳಿಗೆ ಅನುಗುಣವಾಗಿ ಭದ್ರತಾ ಸಿಬ್ಬಂದಿ ಗುರುತಿಸಲಾಗದ ಒಂದು ಸಾವಿರದ ೧೪೭ ಮೃತದೇಹಗಳನ್ನು ಸುರಕ್ಷಿತವಾಗಿ ಇರಿಸಿದ್ದಾರೆ.

---

ಜವಾಹರ್ ನವೋದಯ ವಿದ್ಯಾಲಯಗಳ ೨೭ನೇ ರಾಷ್ಟ್ರೀಯ ಯುವ ಸಂಸತ್ ಸ್ಪರ್ಧೆ ೨೦೨೫-೨೬ರ ಬಹುಮಾನ ವಿತರಣೆ ಸಮಾರಂಭ ನಾಳೆ ನವದೆಹಲಿಯ ಸಂಸತ್ ಭವನ ಸಂಕೀರ್ಣದಲ್ಲಿ ನಡೆಯಲಿದೆ.

ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದು, ಸ್ಪರ್ಧೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವಿಜೇತ ವಿದ್ಯಾರ್ಥಿಗಳು ಹಾಗೂ ವಿದ್ಯಾಲಯಗಳಿಗೆ ಬಹುಮಾನ ವಿತರಿಸಲಿದ್ದಾರೆ.

ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವಾಲಯ, ಕಳೆದ ೩೦ ವರ್ಷಗಳಿಂದ ಜವಾಹರ್ ನವೋದಯ ವಿದ್ಯಾಲಯಗಳಲ್ಲಿ ಯುವ ಸಂಸತ್ ಸ್ಪರ್ಧೆಗಳನ್ನು ಆಯೋಜಿಸುತ್ತಿದೆ.

---

ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ಮಹಾರಾಷ್ಟ್ರ ಸರ್ಕಾರದ ಸಹಯೋಗದೊಂದಿಗೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕುರಿತ ರಾಷ್ಟ್ರೀಯ ಸಮ್ಮೇಳನವನ್ನು ಇದೇ ತಿಂಗಳ ೧೧ ಮತ್ತು ೧೨ರಂದು ಮುಂಬೈನಲ್ಲಿ ಆಯೋಜಿಸಿದೆ.

ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಡಾ. ಮನ್ಸುಖ್ ಮಾಂಡವೀಯ ಸಮ್ಮೇಳನದ ಅಧ್ಯಕ್ಷತೆ ವಹಿಸಲಿದ್ದಾರೆ.

ನಿರ್ಮಾಣ ಕಾರ್ಮಿಕರ ಕಲ್ಯಾಣ ವ್ಯವಸ್ಥೆ ಹಾಗೂ ಕಲ್ಯಾಣ ಮಂಡಳಿಗಳ ಕಾರ್ಯನಿರ್ವಹಣೆ ಬಲಪಡಿಸುವ ಕುರಿತು ಸಮ್ಮೇಳನದಲ್ಲಿ ಚರ್ಚಿಸಲಾಗುವುದು. ಕೌಶಲ್ಯಾಭಿವೃದ್ಧಿ, ಉದ್ಯೋಗಾವಕಾಶಗಳು, ಅಂತಾರಾಷ್ಟ್ರೀಯ ಕಾರ್ಮಿಕ ಚಲನಶೀಲತೆ, ಕಾರ್ಮಿಕ ಅಂಕಿ-ಅಂಶಗಳು ಮತ್ತು ಕಾರ್ಮಿಕ ವ್ಯವಸ್ಥೆಯ ಕುರಿತೂ ಚರ್ಚೆ ನಡೆಯಲಿದೆ.

---

ಯುಎಸ್ ಓಪನ್ ಟೆನಿಸ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್ ಸೆಮಿಫೈನಲ್‌ಗೆ ಅಮೆರಿಕದ ಬೆನ್ ಶೆಲ್ಟನ್ ಲಗ್ಗೆ ಇಟ್ಟಿದ್ದಾರೆ.

ನ್ಯೂಯಾರ್ಕ್‌ನ ಆರ್ಥರ್ ಆಶ್ ಕ್ರೀಡಾಂಗಣದಲ್ಲಿ ಇಂದು ನಡೆದ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಬೆನ್ ಶೆಲ್ಟನ್, ಹಾಲಿ ಚಾಂಪಿಯನ್ ಕಾರ್ಲೋಸ್ ಅಲ್ಕರಾಜ್ ಅವರನ್ನು ಐದು ಸೆಟ್‌ಗಳ ಪಂದ್ಯದಲ್ಲಿ ೬-೭, ೬-೧, ೬-೩, ೧-೬, ೭-೬ ಸೆಟ್‌ಗಳಿಂದ ಸೋಲಿಸಿದರು.

ಬೆನ್ ಶೆಲ್ಟನ್ ಸೆಮಿಫೈನಲ್‌ನಲ್ಲಿ ತಮ್ಮ ದೇಶದವರೇ ಆದ ಫ್ರಾನ್ಸಿಸ್ ಟಿಯಾಫೊ ಅವರನ್ನು ಎದುರಿಸಲಿದ್ದಾರೆ.

---

ಅಹಮದಾಬಾದ್‌ನಲ್ಲಿ ನಡೆದ ವಿಶ್ವ ಬಿಲ್ಲುಗಾರಿಕೆ ಪ್ಯಾರಾ ಸರಣಿ ಮೂರನೇ ಹಂತದ ಸ್ಪರ್ಧೆಯಲ್ಲಿ ಭಾರತ, ಎರಡು ಚಿನ್ನ ಹಾಗೂ ೪ ಕಂಚಿನ ಪದಕಗಳೊಂದಿಗೆ ಅಭಿಯಾನ ಅಂತ್ಯಗೊಳಿಸಿದೆ.

ಪ್ಯಾರಾ ಕಾಂಪೌಂಡ್ ಮಹಿಳೆಯರ ವೈಯಕ್ತಿಕ ವಿಭಾಗದಲ್ಲಿ ಶೀತಲ್ ದೇವಿ, ಶೂಟ್‌ಆಫ್ ಸ್ಪರ್ಧೆಯಲ್ಲಿ ಚಿನ್ನದ ಪದಕ ಗೆದ್ದರು.

ಪ್ಯಾರಾ ರಿಕರ್ವ್ ಮಿಶ್ರ ತಂಡ ವಿಭಾಗದಲ್ಲಿ ಹರ್ವಿಂದರ್ ಸಿಂಗ್ ಹಾಗೂ ಭಾವನಾ ಜೋಡಿ, ಚಿನ್ನದ ಪದಕ ವಿಜೇತರಾದರು.

---

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೮೧೩ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೪ ಸಾವಿರದ ೭೬೪ ಅಂಕಗಳು ದಾಖಲಾಗಿದೆ. ಇದೇ ವೇಳೆ, ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೨೦೪ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೨ ಸಾವಿರದ ೪೩೨ ಅಂಕಗಳು ದಾಖಲಾಗಿದೆ.

ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೫ ರೂಪಾಯಿ ೧೧ ಪೈಸೆಯಷ್ಟಾಗಿದೆ.

__________ ಮುಕ್ತಾಯ _________